1996-97 (ಫೆಬ್ರವರಿ 97ರವರೆಗೆ ಮಾತ್ರ)	255,69,33,000-00 (ಇವರಲ್ಲಿ ಸಾರ್ವಜನಿಕ ಸೇವಾ ವಾಹನಗಳು ಸೇರಿದೆ)

ರಾಜ್ಯದಲ್ಲಿ ಮಿನಿ ವಿಧಾನ ಸೌಧದ ನಿರ್ಮಾಣ

921 - ಶ್ರೀ ಡಿ.ವಿ. ಸದಾನಂದಗೌಡ (ಪುತ್ತೂರು) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಜಿಲ್ಲೆಯ ಉಪವಿಭಾಗ ಕೇಂದ್ರವಾದ ಪುತ್ತೂರಿನಲ್ಲಿ ಮಿನಿ ವಿಧಾನ ಸೌಧವನ್ನು ಕಟ್ಟುವ ಪ್ರಸ್ತಾವನೆ ಸರ್ಕಾರದವರ ಪರಿಶೀಲನೆಯಲ್ಲಿದೆಯೇ, ಹಾಗಿದಲ್ಲಿ ಕಟ್ಟಡದ ಕೆಲಸವನ್ನು ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ರಮೇಶ್ ಸಿ. ಜಿಗಜಿಣಗಿ (ಕಂದಾಯ ಸಚಿವರು) :

ಅ) ಇಲ್ಲ. ಅನುದಾನದ ಲಭ್ಯತೆಯ ಆಧಾರದ ಮೇರೆಗೆ ಹಂತ ಹಂತವಾಗಿ ಪ್ರತಿ ವರ್ಷ ಅವಶ್ಯವಾದ ತಾಲ್ಲೂಕುಗಳಲ್ಲಿ ಮಿನಿ ವಿಧಾನ ಸೌಧ ನಿರ್ಮಿಸುವ ಬಗ್ಗೆ ಪರಿಶೀಲಿಸಲಾಗುತ್ತಿದೆ.

ತೋಟಗಾರಿಕೆ ಇಲಾಖೆಯ ತೂಕದ ವ್ಯತ್ಯಾಸದ ವಿವರ

923 - ಶ್ರೀ ಡಿ.ವಿ. ಸದಾನಂದಾಗೌಡ (ಪುತ್ತೂರು) : ಮಾನ್ಯ ತೋಟಗಾರಿಕೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಜಿಲ್ಲಾ ತೋಟಗಾರಿಕಾ ಇಲಾಖೆಯಲ್ಲಿ ಕೃಷಿಕರಿಗೆ ವಿತರಿಸಲಾದ ಮೈಲು ತುತ್ತಿನ ತೂಕದ ವ್ಯತ್ಯಾಸ ಹಾಗೂ ಕಳಪೆ ವಸ್ತುವಿನ ವಿತರಣೆಯ ಬಗ್ಗೆ ಸರ್ಕಾರ ಕ್ರಮ ತೆಗೆದುಕೊಳ್ಳುವರೇ?

ಆ) ಇನ್ನು ಮುಂದಕ್ಕೆ ಈ ರೀತಿಯಾಗದಂತೆ ಸರ್ಕಾರವು ಕೈಗೊಂಡಿರುವ ಕ್ರಮಗಳೇನು, ಕ್ಯಾಂಪ್ಕೋ ಸಹಕಾರಿ ಸಂಸ್ಥೆಯಿಂದ ಮೈಲು ತುತ್ತು ಖರೀದಿಸುವ ಇರಾದೆ ಸರ್ಕಾರಕ್ಕಿದೆಯೇ?

ಶ್ರೀ ಡಿ.ಟಿ. ಜಯಕುಮಾರ್ (ತೋಟಗಾರಿಕೆ ರಾಜ್ಯ ಸಚಿವರು) :

ಅ) ಹೌದು. ದಕ್ಷಿಣ ಕನ್ನಡ ಜಿಲ್ಲಾ ತೋಟದ ಬೆಳೆಗಾರರ ಸಹಕಾರ ಸಂಘದ ವತಿಯಿಂದ ಪೂರೈಸಿದ ಮೈಲು ತುತ್ತು ತೂಕದಲ್ಲಿ ಮತ್ತು ಗುಣಮಟ್ಟದಲ್ಲಿ ಕಡಿಮೆ ಇರುವ ಬಗ್ಗೆ ತೋಟಗಾರಿಕೆ ಉಪ ನಿರ್ದೇಶಕರು (ಜಿಪ) ದಕ್ಷಿಣ ಕನ್ನಡ ಇವರಿಗೆ ಕಾರಣ ಕೇಳುವ ನೋಟಿಸ್ ಜಾರಿ ಮಾಡಲಾಗಿದ್ದು, ಈ ಬಗ್ಗೆ ಸದರಿ ಅವ್ಯವಹಾರಕ್ಕೆ ಸಂಬಂಧಿಸಿದಂತೆ ಅಧಿಕಾರಿಗಳ ಮೇಲೆ ಸೂಕ್ತ ಶಿಸ್ತಿನ ಕ್ರಮ ತೆಗೆದುಕೊಳ್ಳಲು ವಿಚಾರಣೆಗೊಳಪಡಿಸಲು ಮುಖ್ಯ ಕಾರ್ಯದರ್ಶಿಗಳು (ಜಿಪ) ದಕ್ಷಿಣ ಕನ್ನಡ ಇವರಿಗೆ ಶಿಫಾರಸ್ಸು ಮಾಡಿ ದಿನಾಂಕ 07-11-1996 ರಂದು ಪತ್ರ ಬರೆಯಲಾಗಿದೆ.